**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ 743/2018**

| | | |
|---|---|---|
| ಸಾಕ್ಷಿದಾರರ ಹೆಸರು | **ಮಹದೇವ** | **ಪ್ರಾಸಾಃ 02** |
| ತಂದೆಯ/ಗಂಡನ ಹೆಸರು | ಪುಟ್ಟೇಗೌಡ | **ಚಾಸಾಃ 05** |
| ವಯಸ್ಸು | 46 ವರ್ಷ | |
| ಕೆಲಸ | ವ್ಯವಸಾಯ | |
| ವಾಸ | ಚಿನ್ನದಗುಡಿ ಹುಂಡಿ | |

ದಿಃ 05.11.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಪ್ರಾಹ್ಞ ಸ.ಸ.ಅ ರವರಿಂದಃ**

ಆರೋಪಿತರ ಪರಿಚಯ ಇದೆ. ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಪೊಲೀಸರಿಗೆ ನಾನು ಯಾವುದೇ ಹೇಳಿಕೆ ನೀಡಿರುವುದಿಲ್ಲ.

ಸಾಕ್ಷಿ ನಿರಾಕರಿಸಿದ ಹೇಳಿಕೆಯನ್ನು ನಿ.ಪಿ. 2 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಪ್ರಾಹ್ಞ ಸ.ಸ.ಅ ರವರಿಂದಃ**

ದಿಃ 27.10.2017 ರಂದು ಬೆಳಿಗ್ಗೆ 7.30 ಗಂಟೆ ಸಮಯದಲ್ಲಿ ಚಾಸಾ 1 ರವರ ಮನೆಯ ಹತ್ತಿರ ಗಲಾಟೆಯಾಗುತ್ತಿದೆ ಎಂದು ತಿಳಿದು ಹೋಗಿ ನೋಡಲಾಗಿ ಚಾಸಾ 1 ರವರು ಮನೆಯ ಮುಂಭಾಗದ ಪಡಸಾಲೆಯ ಮೇಲೆ ಕುಳಿತಿದ್ದು ಆಗ 1 ನೇ ಆರೋಪಿ ಚಾಸಾ 1 ರವರನ್ನು ಕುರಿತು ಅವಾಚ್ಯ ಶಬ್ದಗಳಿಂದ ಬೈಯುತ್ತಿದ್ದರು ಎಂದರೆ ಸರಿಯಲ್ಲ. ಆಗ ಚಾಸಾ 1 ರವರು ಏಕೆ ಹೀಗೆ ಬೈಯುತ್ತಿದ್ದೀರಾ ಎಂದು ಕೇಳಿದಾಗ 2 ನೇ ಆರೋಪಿಯು ಚಾಸಾ 1 ರವರನ್ನು ತಬ್ಬಿ ಹಿಡಿದುಕೊಂಡಾಗ 1 ನೇ ಆರೋಪಿ ಅಲ್ಲೆ ಬಿದ್ದಿದ್ದ ಒಂದು ದೊಣ್ಣೆಯಿಂದ ಚಾಸಾ 1 ರವರ ತಲೆಗೆ ಮತ್ತು ಕೈಗಳಿಗೆ ಹೊಡೆದು ನೋವುಂಟು ಮಾಡಿರುತ್ತಾರೆ ಎಂದರೆ ಸರಿಯಲ್ಲ. ಅಷ್ಟರಲ್ಲಿ 3 ನೇ ಆರೋಪಿ ಬಂದು ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಅಷ್ಟರಲ್ಲಿ ಅಲ್ಲಿಗೆ

ಬಂದ ಚಾಸಾ 3 ರವರು ಜಗಳ ಬಿಡಿಸಿರುತ್ತಾರೆ ಎಂದರೆ ಸರಿಯಲ್ಲ. ಆಗ ಮೂರು ಜನ ಆರೋಪಿಗಳು ಕೊಲೆ ಬೆದರಿಕೆ ಹಾಕಿ ಅಲ್ಲಿಂದ ಹೊರಟು ಹೋಗಿರುತ್ತಾರೆ ಎಂದರೆ ಸರಿಯಲ್ಲ. ನಂತರ ನಾನು ಮತ್ತು ಚಾಸಾ 4 ರವರು ಚಾಸಾ 1 ರವರನ್ನು ಯಾವುದೋ ಒಂದು ವಾಹನದಲ್ಲಿ ಚಿಕಿತ್ಸೆಗಾಗಿ ನಂಜನಗೂಡು ಆಸ್ಪತ್ರೆಗೆ ದಾಖಲಿಸಿರುತ್ತಾರೆ ಎಂದರೆ ಸರಿಯಲ್ಲ.

ಈಗ ಓದಿ ಕೇಳಿಸಿಕೊಂಡ ನಿ.ಪಿ. 2 ರಂತೆ ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿ ಪರ ವಕೀಲರಿಂದ ಇಲ್ಲ ಎಂದು ತಿಳಿಸಿರುತ್ತಾರೆ.

**ಮರುವಿಚಾರಣೆಃ ಇಲ್ಲ**

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ.ಹೇ.ಕೇ.ಸ.ಇದೆ.ಎಂ.ಒ**

1 **ನೇ ಹೆಚ್ಚುವರಿ ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ನ್ಯಾಯಾಲಯ, ನಂಜನಗೂಡು**